**O.S. No. 449/2022**
**ಪಿ.ಡಬ್ಲ್ಯು-01**

**<u>ಸಾಕ್ಷಿಯನ್ನು ದಿನಾಂಕಃ 05.06.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲುಃ ಪ್ರತಿವಾದಿಗಳ ಪರ ಶ್ರೀ ಬಿ.ವೈ, ವಕೀಲರಿಂದಃ</u>**

ನಾನು ಹಾಜರುಪಡಿಸಿರುವ ನಿಪಿ-1 ನೋಟರಿ ಸಮಕ್ಷಮ ಸಹಿ ಮಾಡಿರುವ ವಂಶವೃಕ್ಷ ಪ್ರಮಾಣಪತ್ರವಾಗಿರುತ್ತದೆ ಎಂದರೆ ಸರಿ. ನಿಪಿ-1 ನ್ನು ನನ್ನ ಹೇಳಿಕೆಯ ಮೇರೆಗೆ ತಯಾರಿಸಿರುತ್ತಾರೆ ಎಂದರೆ ಸರಿ. ವಂಶವೃಕ್ಷವನ್ನು ಹೆಮ್ಮರಗಾಲ ಪಂಚಾಯಿತಿಯಿಂದ ಪಡೆದು ಹಾಜರುಪಡಿಸಿರುತ್ತೇನೆ. ಅಂತಹ ಯಾವುದೇ ವಂಶವೃಕ್ಷವನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ವಂಶವೃಕ್ಷಕ್ಕೆ ಸಂಬಂಧಿಸಿದಂತೆ ಗ್ರಾಮ ಲೆಕ್ಕಿಗರಾಗಲಿ ಅಥವಾ ಕಂದಾಯ ಅಧಿಕಾರಿಗಳಾಗಲಿ ಬಂದು ಯಾವುದೇ ಮಹಜರ್ ತಯಾರಿಸಿಲ್ಲ. ನಮ್ಮ ವಕೀಲರ ಮೂಲಕ ಹೆಮ್ಮರಗಾಲ ಗ್ರಾಮ ಪಂಚಾಯಿತಿಗೆ ಯಾವುದೇ ಕ್ರಮವಹಿಸಬಾರದೆಂದು ನೋಟಿಸ್ ಕಳುಹಿಸಿರುತ್ತೇನೆ ಎಂದರೆ ಸರಿ. ನಿಪಿ-2 ಮತ್ತು 3 ನ್ನು ಈ ಪ್ರಕರಣಕ್ಕಾಗಿ ಕೊಟ್ಟಿರುತ್ತೇನೆ ಎಂದರೆ ಸರಿ. ಆಧಾರ್ ಕಾರ್ಡ್ ನ್ನು ನನ್ನ ಹೇಳಿಕೆಯ ಮೇರೆಗೆ ತಯಾರಿಸಿರುತ್ತಾರೆ ಎಂದರೆ ಸರಿ. ನಿಪಿ-6 ನ್ನು ನನ್ನ ಹೇಳಿಕೆಯಂತೆ ತಯಾರಿಸಿರುತ್ತಾರೆ ಎಂದರೆ ಸರಿ. ಆಧಾರ್ ಕಾರ್ಡ್ ಮತ್ತು ಚುನಾವಣಾ ಗುರುತಿನ ಚೀಟಿ ತಯಾರಿಸುವ ಪೂರ್ವದಲ್ಲಿ ಯಾವುದೇ ಅಧಿಕಾರಿಗಳು ನಮ್ಮ ಮನೆಯ ಬಳಿ ಬಂದು ನನ್ನ ಹೇಳಿಕೆ ಪಡೆದಿಲ್ಲ. ಕಾಳೇಗೌಡರು ಪುಟ್ಟಮಾದಮ್ಮ ಎಂಬುವವರನ್ನು ವಿವಾಹವಾಗಿದ್ದು, ಅವರಿಗೆ 1 ರಿಂದ 3 ನೇ ಪ್ರತಿವಾದಿಗಳು ಮಾತ್ರ ಮಕ್ಕಳಿದ್ದು, ನಾನು ಕಾಳೇಗೌಡರವರ ಪತ್ನಿಯಾಗಿರುವುದಿಲ್ಲ ಎಂದರೆ ಸರಿಯಲ್ಲ. ಕಾಳೇಗೌಡರು ಪುಟ್ಟಮಾದಮ್ಮ ಎಂಬುವವರು ಮಾತ್ರ ವಿವಾಹವಾಗಿದ್ದರು ಎಂದರೆ ಸರಿಯಲ್ಲ. ಆದ್ದರಿಂದ ನಮ್ಮ ಮತ್ತು ಕಾಳೇಗೌಡರವರ ನಡುವೆ ಯಾವುದೇ ಒಟ್ಟು ಕುಟುಂಬದ ಪರಿಕಲ್ಪನೆ ಉದ್ಭವಿಸುವುದಿಲ್ಲ ಎಂದರೆ ಸರಿಯಲ್ಲ. ಕಾಳೇಗೌಡರವರು ಯಾವತ್ತು ನನ್ನನ್ನು ಮದುವೆಯಾಗಿರುವುದಿಲ್ಲ ಎಂದರೆ

ಸರಿಯಲ್ಲ. ದಾವಾ ಸ್ವತ್ತುಗಳು ಕಾಳೇಗೌಡರವರು ಹೇಗೆ ಬಂದಿರುತ್ತವೆ ಎಂದು ನನಗೆ ಗೊತ್ತಿರುವುದಿಲ್ಲ ಎಂದರೆ ನನ್ನ ಅತ್ತೆ ಮಾವರವರಿಂದ ಬಂದಿರುತ್ತದೆ. ನಾನು ಹೇಳುವ ವಿಚಾರಗಳೆಲ್ಲವೂ ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ. 2 ನೇ ದಾವಾ ತಪಶೀಲು ಸ್ವತ್ತು ಕಾಳೇಗೌಡರವರ ಸ್ವಯಾರ್ಜಿತ ಸ್ವತ್ತಾಗಿರುತ್ತದೆ ಎಂದರೆ ಸರಿಯಲ್ಲ. ಸದರಿ ಸ್ವತ್ತು ಕಾಳೇಗೌಡರವರ ಸ್ವಯಾರ್ಜಿತ ಸ್ವತ್ತಾಗಿರುವುದರಿಂದ ಅದನ್ನು ನೋಂದಾಯಿತ ವಿಲ್ ನಾಮೆಯ ಮೂಲಕ 3 ನೇ ಪ್ರತಿವಾದಿಗೆ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ನನಗು ಮತ್ತು ಕಾಳೇಗೌಡರವರಿಗೂ ಯಾವುದೇ ಸಂಬಂಧವಿರುವುದಿಲ್ಲ ಮತ್ತು ನಾನು ಅವರ ಪತ್ನಿಯಾಗಿರುವುದಿಲ್ಲ ಎಂದರೆ ಸರಿಯಲ್ಲ. ನನಗು ಮತ್ತು ದಾವಾ ಸ್ವತ್ತುಗಳಿಗೂ ಯಾವುದೇ ಸಂಬಂಧವಿರುವುದಿಲ್ಲ ಎಂದರೆ ಸರಿಯಲ್ಲ. ಆದ್ದರಿಂದ ದಾವಾ ಸ್ವತ್ತುಗಳಲ್ಲಿ ಯಾವುದೇ ಭಾಗಾಂಶ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ** ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ,**

**ನಂಜನಗೂಡು.**